ಕರ್ನಾಟಕ ಸರ್ಕಾರ

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 4–4–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಹಸಿರುಕ್ರಾಂತಿಯ ಹರಿಕಾರ, ರಾಷ್ಟ್ರನಾಯಕ, ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನರಾಂ ಅವರ 108ನೇ ಜನ್ಮ ದಿನಾಚರಣೆ.<br><br>ಮಾಲಾರ್ಪಣೆ ಹಾಗೂ ಉದ್ಘಾಟನೆ:<br><br>ಶ್ರೀ ಸಿದ್ದರಾಮಯ್ಯ,<br>ಮುಖ್ಯ ಮಂತ್ರಿಗಳು,<br><br>ಅಧ್ಯಕ್ಷತೆ:<br><br>ಶ್ರೀ ಹೆಚ್. ಆಂಜನೇಯ, ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.<br><br>ಉಪನ್ಯಾಸ:<br><br>ಡಾ. ಕೆ. ಮರಳಸಿದ್ದಪ್ಪ,<br>ಖ್ಯಾತ ಸಾಹಿತಿಗಳು, ಬೆಂಗಳೂರು. | 05–04–2015<br>ಭಾನುವಾರ<br>ಬೆಳಿಗ್ಗೆ<br>9–30 ಗಂಟೆಗೆ<br><br>ಬೆಳಿಗ್ಗೆ<br>10–00 ಗಂಟೆಗೆ | ವಿಧಾನಸೌಧದ ಮುಂಭಾಗ,<br>ಬೆಂಗಳೂರು.<br><br>ಸಾರ್ವಜನಿಕ ಸಮಾರಂಭ,<br>ಬ್ಯಾಂಕ್ವೆಟ್ ಹಾಲ್,<br>ವಿಧಾನಸೌಧ,<br>ಬೆಂಗಳೂರು. |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

# ವೆಬ್‌ಸೈಟ್‌ನಲ್ಲಿ ಪ್ರವೇಶ ಪತ್ರ

**ಬೆಂಗಳೂರು, ಏಪ್ರಿಲ್ 4 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 19–4–2015 ರಂದು ನಡೆಸುವ 2014 ನೇ ಸಾಲಿನ ಗೆಜೆಟೆಡ್ ಪ್ರೊಬೇಷನರ್ಸ್ ಪೂರ್ವಭಾವಿ ಪರೀಕ್ಷೆಯ ಪತ್ರವನ್ನು ಅಭ್ಯರ್ಥಿಗಳು ತಮ್ಮ ಅರ್ಜಿಯ ಐ.ಡಿ. ಸಂಖ್ಯೆ ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಆಯೋಗದ ವೆಬ್‌ಸೈಟ್ http://kpsc.kar.nic.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.**

ಪೂರ್ಣಿಮ:ಜಿಪಿಆರ್.

# ADMISSION TICKETS ON WEBSITE

Bangalore, April 4 (Karnataka Information)

**The Admission Tickets of Gazetted Probationers Preliminary Examination 2014 to be held on 19-04-2015 could be down loaded from the Commission's website http://kpsc.kar.nic.in by indicating the candidates' application I.D. No and date of birth, says an press release by the Karnataka Public Service Commission.**

ಪೂರ್ಣಿಮ:ಜಿಪಿಆರ್.

# ನಕ್ಷತ್ರ ವೀಕ್ಷಣೆ ಕಾರ್ಯಕ್ರಮ

**ಬೆಂಗಳೂರು, ಏಪ್ರಿಲ್ 4 (ಕರ್ನಾಟಕ ವಾರ್ತೆ)**

**ಬೆಂಗಳೂರು ಅಸೋಸಿಯೇಷನ್ ಫಾರ್ ಸೈನ್ಸ್ ಎಜುಕೇಷನ್ ಸಂಸ್ಥೆಯು ಜವಾಹರ್‌ಲಾಲ್ ನೆಹರು ತಾರಾಲಯದಲ್ಲಿ ಏಪ್ರಿಲ್ 5 ರಂದು ಸಂಜೆ 6–30 ಗಂಟೆಗೆ ನಗರದ ಜವಾಹರ್‌ಲಾಲ್ ನೆಹರು ತಾರಾಲಯದಲ್ಲಿ 'ನಕ್ಷತ್ರ ವೀಕ್ಷಣೆ' ಕಾರ್ಯಕ್ರಮವನ್ನು ಏರ್ಪಡಿಸಿದೆ.**

**ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 2237 9725 / 226** 6084 **ಅಥವಾ ಅನ್ನು http://www.taralaya.org/monthly.sky.chart.php ಸಂಪರ್ಕಿಸಬಹುದಾಗಿದೆ ಎಂದು ಜವಾಹರ್‌ಲಾಲ್ ನೆಹರೂ ತಾರಾಲಯದ ಪ್ರಕಟಣೆ ತಿಳಿಸಿದೆ.**

ಪೂರ್ಣಿಮ:ಜಿಪಿಆರ್.

# ಇಲಾಖಾ ಪರೀಕ್ಷೆಗೆ ಅರ್ಜಿ ಆಹ್ವಾನ

**ಬೆಂಗಳೂರು, ಏಪ್ರಿಲ್ 4 (ಕರ್ನಾಟಕ ವಾರ್ತೆ)**

**ಕರ್ನಾಟಕ ಲೋಕಸೇವಾ ಆಯೋಗವು 2015 ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾವಾರು ಪರೀಕ್ಷೆಗಳನ್ನು ಏಪ್ರಿಲ್ 11 ರಿಂದ 13 ರವರೆಗೆ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳು ಮತ್ತು ನವದೆಹಲಿ ಕೇಂದ್ರದಲ್ಲಿ, ಏಪ್ರಿಲ್ 15 ರಿಂದ 25 ರವರೆಗೆ ಬೆಂಗಳೂರು, ಬೆಳಗಾವಿ, ವಿಜಯಪುರ, ಗದಗ, ಕಲಬುರಗಿ, ಮಂಗಳೂರು, ಮೈಸೂರು, ರಾಯಚೂರು ಶಿವಮೊಗ್ಗ ಹಾಗೂ ನವದೆಹಲಿ ಕೇಂದ್ರ ಹಾಗೂ ಏಪ್ರಿಲ್ 27 ರಿಂದ ಮೇ 3 ರವರೆಗೆ ಬೆಂಗಳೂರು ಕೇಂದ್ರಗಳಲ್ಲಿ ನಡೆಸಲಿದೆ.**

**ಈ ಪರೀಕ್ಷೆಗಳಿಗೆ ಅರ್ಹರಾಗಿರುವ ಅಭ್ಯರ್ಥಿಗಳು ಆಯೋಗದ ವೆಬ್‌ಸೈಟ್ "http://kpsc.kar.nic.in" ಮೂಲಕ ಸೂಚನೆ ಹಾಗೂ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.**

ಪೂರ್ಣಿಮ:ಜಿಪಿಆರ್.